## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ. ಎನ್ ಮಂಜೇಗೌಡ ರವರು ನಿಯಮ 330 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

**ವಿಷಯ:**

2023-24ನೇ ಶೈಕ್ಷಣಿಕ ವರ್ಷ ಆರಂಭವಾಗಿದೆ. ಮಕ್ಕಳನ್ನು ಶಾಲೆಗೆ ಬರಮಾಡಿಕೊಳ್ಳಲು ಶಿಕ್ಷಕರು ಉತ್ಸುಕರಾಗಿದ್ದಾರೆ. ಆದರೆ ಸಮವಸ್ತ್ರ ಮತ್ತು ಪಠ್ಯಪುಸ್ತಕಗಳು ಇನ್ನೂ ಶಾಲೆಗಳನ್ನು ತಲುಪಿಲ್ಲ. ಸರ್ಕಾರ ಪೂರೈಸಿದರೂ ಜಿಲ್ಲಾ ಕೇಂದ್ರದಿಂದ ತರಿಸಿಕೊಳ್ಳಲು ಶಾಲೆಗಳ ಬಳಿ ಹಣ ಇಲ್ಲದಿರುವುದೇ ಇದಕ್ಕೆ ಕಾರಣ ಎಂಬುದು ತಿಳಿದುಬಂದಿದೆ. ಶಿಕ್ಷಣ ಇಲಾಖೆಯು ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ಜಿಲ್ಲಾ ಕೇಂದ್ರಗಳಿಗೆ ರವಾನಿಸಿದೆ. ಅಲ್ಲಿಂದ ತಾಲ್ಲೂಕು ಕೇಂದ್ರಗಳಿಗೆ ಕೊಂಡೊಯ್ಯುವುದು ಕ್ಷೇತ್ರ ಶಿಕ್ಷಣಾಧಿಕಾರಿಗಳ (ಬಿ.ಇ.ಓ) ಹೊಣೆ. ಬಿ.ಇ.ಓ ಕಛೇರಿಯಿಂದ ಮಾಹಿತಿ ಬಂದ ಬಳಿಕ ಆಯಾ ಶಾಲೆಗಳು ತರಿಸಿಕೊಳ್ಳುವ ವ್ಯವಸ್ಥೆ ಮಾಡಿಕೊಳ್ಳಬೇಕು. ಆದರೆ ಇದರ ಜವಾಬ್ದಾರಿಯನ್ನು ಅಧಿಕಾರಿಗಳು ತೆಗೆದುಕೊಳ್ಳದಿರುವ ವಿಷಯವನ್ನು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

ವಿದ್ಯಾವಿಕಾಸ ಯೋಜನೆಯಡಿಯಲ್ಲಿ 2023-24ನೇ ಸಾಲಿಗೆ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ಉಚಿತವಾಗಿ ಶಾಲಾ ಹಂತಕ್ಕೆ ವಿತರಿಸಲಾಗಿದ್ದು, ಸರ್ಕಾರಿ ಮತ್ತು ಅನುದಾನಿತ ಶಾಲಾ ಮಕ್ಕಳಿಗೆ ವಿತರಿಸುವ ಉಚಿತ ಪಠ್ಯಪುಸ್ತಕಗಳನ್ನು ಮುದ್ರಕರಿಂದ ತಾಲ್ಲೂಕು ಹಂತಕ್ಕೆ ನೇರವಾಗಿ ಸರಬರಾಜು ಮಾಡಲಾಗಿದೆ. ಪ್ರತಿ ವಿದ್ಯಾರ್ಥಿಗೆ ರೂ.1.50 ರಂತೆ ಸಾಗಾಣಿಕಾ ವೆಚ್ಚವನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದ್ದು, ಸದರಿ ಅನುದಾನವನ್ನು ಬಳಸಿಕೊಂಡು ತಾಲ್ಲೂಕು ಹಂತದಿಂದ ಶಾಲಾ ಹಂತಕ್ಕೆ ಪಠ್ಯಪುಸ್ತಕಗಳನ್ನು ಸಕಾಲದಲ್ಲಿ ತಲುಪಿಸಲಾಗಿದೆ.

ವಿದ್ಯಾವಿಕಾಸ ಯೋಜನೆಯಡಿಯಲ್ಲಿ 2023-24ನೇ ಸಾಲಿನ ಎಲ್ಲಾ ಸರ್ಕಾರಿ ಶಾಲೆಗಳ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರಗಳ ಸರಬರಾಜಿಗೆ ಸಂಬಂಧಿಸಿದಂತೆ ಸರಬರಾಜುದಾರರು ಪ್ರತಿ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಸಮವಸ್ತ್ರ ಬಟ್ಟೆಗಳನ್ನು ನೇರವಾಗಿ ಸರಬರಾಜು ಮಾಡಿದ್ದು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾಗಾಣಿಕಾ ವೆಚ್ಚ ರೂ.20,000/- ಗಳನ್ನು ತಮ್ಮ ಖಾತೆಯಲ್ಲಿ ಲಭ್ಯವಿರುವ ಅನುದಾನದಿಂದ ಬಳಸಿಕೊಂಡು ಸದರಿ ಸಮವಸ್ತ್ರಗಳನ್ನು ಶಾಲೆಗಳಿಗೆ ಸರಬರಾಜು ಮಾಡಿರುತ್ತಾರೆ.

**ಸಂಖ್ಯೆ: ಇಪಿ 52 ಎಮ್ ಪಿ ಇ 2023**

(ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ